# ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ

2ನೇ ಮಹಡಿ, ಜಿಲ್ಲಾಧಿಕಾರಿಗಳ ಕಛೇರಿ ಕಟ್ಟಡ, ಸಿಟಿ ಸಿವಿಲ್ ನ್ಯಾಯಾಲಯದ ಆವರಣ ಹತ್ತಿರ
ಕೆ.ಜಿ. ರಸ್ತೆ, ಬೆಂಗಳೂರು – 560 009, ದೂರವಾಣಿ 080–22133558

ನಂ.ಕೆಪಿಎಲ್‌ಸಿ/ಆಡಳಿತ/ಸಿಬ್ಬಂದಿ/ಸಿಆರ್–02/2015–16 ದಿನಾಂಕ:25–05–2015

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು–560 001.

ಮಾನ್ಯರೆ,

ವಿಷಯ: ನಿಗಮದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರು, ಪ್ರಥಮ ದರ್ಜೆ ಸಹಾಯಕರು ಮತ್ತು ದ್ವಿತೀಯ ದರ್ಜೆ ಸಹಾಯಕರ ಹುದ್ದೆಯನ್ನು ಭರ್ತಿ ಮಾಡುವ ಬಗ್ಗೆ.

*****

ಸರ್ಕಾರದ ಆದೇಶ ಸಂಖ್ಯೆ.ಆರ್.ಡಿ.388/ಎಲ್‌ಜಿಬಿ/2008, ದಿನಾಂಕ:29–08–2008ರಲ್ಲಿ ಸರ್ಕಾರಿ ಜಮೀನುಗಳ ಸಂರಕ್ಷಣೆ ಕಾರ್ಯಕ್ಕಾಗಿ ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ (ನಿ.) ವನ್ನು ಸ್ಥಾಪಿಸಲು ಸರ್ಕಾರ ಅನುಮೋದನೆ ನೀಡಿದ್ದು, ಅದರಂತೆ ದಿನಾಂಕ:31–12–2008 ರಂದು ಸದರಿ ನಿಗಮವು ಕಂಪನಿಗಳ ಅಧಿನಿಯಮ, 1956 ರನ್ವಯ ನೋಂದಾಯಿಸಲ್ಪಟ್ಟಿದೆ.

ಈ ನಿಗಮವು ತನ್ನ ಧ್ಯೇಯೋದ್ದೇಶಗಳನ್ವಯ ಕಾರ್ಯನಿರ್ವಹಿಸುತ್ತಿದ್ದು, ಇತ್ತೀಚೆಗೆ ಸಾರ್ವಜನಿಕರಿಂದ ಸರ್ಕಾರಿ ಜಮೀನುಗಳು ಹಾಗೂ ಸರ್ಕಾರಿ ಕೆರೆ ಜಮೀನುಗಳ ಒತ್ತುವರಿಗೆ ಸಂಬಂಧಿಸಿದಂತೆ ಹಲವಾರು ದೂರುಗಳು ನಿಗಮಕ್ಕೆ ಬರುತ್ತಿದ್ದು, ಈ ದೂರುಗಳ ಮೇಲೆ ಸಂಬಂಧಪಟ್ಟ ಜಿಲ್ಲಾಧಿಕಾರಿ / ತಹಶೀಲ್ದಾರ್‌ರಿಂದ ವರದಿ ಪಡೆದು ಪರಿಶಿಲಿಸುವ ಅಗತ್ಯ ಇರುತ್ತದೆ. ಇಂತಹ ಪ್ರಕರಣಗಳು ದಿನೇ ದಿನೇ ಹೆಚ್ಚುತ್ತಿದ್ದು, ಇವುಗಳನ್ನು ನಿರ್ವಹಿಸಿ ಕ್ರಮ ಕೈಗೊಳ್ಳಲು ಅಧಿಕಾರಿ/ಸಿಬ್ಬಂದಿ ಕೊರತೆ ಇರುತ್ತದೆ.

ಸರ್ಕಾರಿ ಜಮೀನುಗಳ ಒತ್ತುವರಿ ತೆರವು ವಿಚಾರಕ್ಕೆ ಸಂಬಂಧಿಸಿದಂತೆ, ರಾಜ್ಯ ಉಚ್ಚ ನ್ಯಾಯಾಲಯದ ಮುಂದಿರುವ ಸಾರ್ವಜನಿಕ ಹಿತಾಸಕ್ತಿ ರಿಟ್ ಅರ್ಜಿಗಳಿಗೆ ಸಂಬಂಧಿಸಿದಂತೆ, ಸರ್ಕಾರಿ / ಸಾರ್ವಜನಿಕ ಜಮೀನುಗಳ ಒತ್ತುವರಿ ವಿಚಾರದಲ್ಲಿ ಸಮಗ್ರ ಮಾಹಿತಿಗಳನ್ನು ಕ್ರೋಢೀಕರಿಸಿ, ಪ್ರತಿ ವಿಚಾರಣಾ ದಿನಾಂಕದಂದು ನ್ಯಾಯಾಲಯಕ್ಕೆ ಸಲ್ಲಿಸಬೇಕಾಗಿದೆ. ಇದಕ್ಕಾಗಿ ಎಲ್ಲಾ ಜಿಲ್ಲಾಧಿಕಾರಿಗಳ ಕಛೇರಿಗಳಿಗೂ ವ್ಯೆಯುಕ್ತಿಕವಾಗಿ ದೂರವಾಣಿ ಮೂಲಕ ಸಂಪರ್ಕ ಮಾಡಿ, ಮಾಹಿತಿಗಳನ್ನು ಪಡೆದುಕೊಳ್ಳಬೇಕಾಗುವುದು. ಈ ಕೆಲಸಕ್ಕಾಗಿ, ಇಲಾಖೆಯಲ್ಲಿ ಅನುಭವ ಹೊಂದಿರುವ ಅಧಿಕಾರಿ / ನೌಕರರ ಅಗತ್ಯ ಇರುತ್ತದೆ.

ಅಲ್ಲದೆ, ಈ ನಿಗಮದಲ್ಲಿ ರಾಜ್ಯದ ಸರ್ಕಾರಿ ಕೆರೆ ಜಮೀನುಗಳ ಮಾಹಿತಿಯನ್ನು ಸಂಗ್ರಹಿಸಿ ಅವುಗಳನ್ನು ಸಾರ್ವಜನಿಕರಿಗೆ ಮಾಹಿತಿ ಲಭ್ಯ ಮಾಡುವ ನಿಟ್ಟಿನಲ್ಲಿ ತಂತ್ರಾಂಶವನ್ನು ರೂಪಿಸಿದ್ದು, ಈ ಕಾರ್ಯಕ್ರಮವನ್ನು ಪೂರ್ಣಗೊಳಿಸುವ ಅಗತ್ಯವಿದೆ. ಅಲ್ಲದೆ, ಸರ್ಕಾರಿ ಜಮೀನುಗಳು/ಮುಜರಾಯಿ ಜಮೀನುಗಳು/ವಕ್ಫ್ ಜಮೀನುಗಳು/ನಗರ ಸ್ಥಳೀಯ ಸಂಸ್ಥೆಗಳಿಗೆ ಸೇರಿದ ಜಮೀನುಗಳ ಮಾಹಿತಿಯನ್ನು ಕ್ರೋಢೀಕರಿಸಲು ನಿಗಮವು ಕಾರ್ಯಗಳನ್ನು ರೂಪಿಸುತ್ತಿದೆ. ಮುಂದುವರೆದು, ಇತ್ತೀಚೆಗೆ ಸರ್ಕಾರವು ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳ ಸರ್ಕಾರಿ ಕೆರೆ ಜಮೀನುಗಳ ಒತ್ತುವರಿ ವಿಚಾರಕ್ಕೆ ಸಂಬಂಧಿಸಿದಂತೆ ಅಧ್ಯಯನಕ್ಕಾಗಿ ಜಂಟಿ ಸದನ ಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ಕಾರ್ಯೋನ್ಮುಖವಾಗಿದ್ದು, ಸಮಿತಿಗೆ ಅಗತ್ಯ ಮಾಹಿತಿ ನೀಡಲು ಸಹ ಕ್ರಮ ಕೈಗೊಳ್ಳಬೇಕಾಗಿದೆ. ಈ ಎಲ್ಲಾ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ನಿರ್ವಹಿಸಲು ನಿಗಮಕ್ಕೆ ಹೆಚ್ಚಿನ ಸಿಬ್ಬಂದಿ ಅವಶ್ಯಕತೆ ಇದೆ.

ಆದಾಗ್ಯೂ, ಈ ನಿಗಮದಲ್ಲಿ ಮಂಜೂರಾದ ಈ ಕೆಳಕಂಡ ಹುದ್ದೆಗಳು ಬಹುದಿನಗಳಿಂದ ಖಾಲಿ ಇದ್ದು ಇವುಗಳನ್ನು ತುಂಬಲು ಯಾವುದೇ ಕ್ರಮ ಕೈಗೊಂಡಿಲ್ಲ. ಆದುದರಿಂದ, ಸದರಿ ಖಾಲಿ ಹುದ್ದೆಗಳನ್ನು ತುಂಬಲು ಕೂಡಲೇ ಕ್ರಮಕೈಗೊಳ್ಳುವಂತೆ ಈ ಮೂಲಕ ಕೋರಿದೆ.

| | | |
|---|---|---|
| 1. | ಶೀಘ್ರಲಿಪಿಗಾರರು<br>(ಕನ್ನಡ ಮತ್ತು ಇಂಗ್ಲೀಷ್ ಶೀಘ್ರಲಿಪಿ) | 1 ಹುದ್ದೆ |
| 2. | ಪ್ರಥಮ ದರ್ಜೆ ಸಹಾಯಕರು | 1 ಹುದ್ದೆ |
| 3. | ದ್ವಿತೀಯ ದರ್ಜೆ ಸಹಾಯಕರು | 1 ಹುದ್ದೆ |

ಈ ನಿಟ್ಟಿನಲ್ಲಿ ಕೂಡಲೇ ಕ್ರಮಕೈಗೊಳ್ಳಲು ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡುವಂತೆ ತಮ್ಮಲ್ಲಿ ಮತ್ತೊಮ್ಮೆ ವಿನಂತಿಸಿದೆ.

ತಮ್ಮ ವಿಶ್ವಾಸಿ,

25.5.15,

ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ
ಬೆಂಗಳೂರು